RA No.2/2023
CW-1 D.K.Shantha
Date: 16.10.2024

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು 1 ನೇ ಎದುರುದಾರರ ಪರ : ಶ್ರೀ ಕೆ ಬಿ ಪಿ ವಕೀಲರಿಂದಃ**

1 ನೇ ಮೇಲ್ಮನವಿದಾರರು ನನ್ನ ಅಕ್ಕ. ಚಳ್ಳಕೆರೆ ಪ್ರಧಾನ ಸಿವಿಲ್ ನ್ಯಾಯಾಲಯದಿಂದ ನನಗೆ ಸಮನ್ಸ್ ಬಂದಿತ್ತು ಎಂದರೆ ಸಾಕ್ಷಿ ಒಂದೇ ಒಂದು ನೋಟಿಸ್ ಬಂದಿತ್ತು ಎಂದು ನುಡಿದಿರುತ್ತಾರೆ. ಆ ಸಮಯದಲ್ಲಿ ನಾನು ಹೊಸಪೇಟೆಯಲ್ಲಿ ವಾಸವಾಗಿದ್ದೇನು. ಆ ಸಮಯದಲ್ಲಿ ರಮಾಮಣಿ ಮತ್ತು ಪ್ರೇಮಾ ರವರು ಕೂಡ ಹೊಸಪೇಟೆಯಲ್ಲಿಯೇ ವಾಸವಾಗಿದ್ದರು ಎಂದರೆ ಸರಿಯಲ್ಲ. 1 ನೇ ಮೇಲ್ಮನವಿದಾರರಿಗೆ ದಿನಾಂಕ 05.04.2018 ರಂದು ನ್ಯಾಯಾಲಯದ ಸಮನ್ಸ್ ಜಾರಿಯಾಗಿತ್ತು ಎಂದರೆ ಸರಿಯಲ್ಲ. ಅದೇ ರೀತಿ ದಿನಾಂಕ 11.03.2020 ರಂದು ನನಗೆ ಮತ್ತು ವಿಜಯಮ್ಮ ರವರಿಗೆ ಸಮನ್ಸ್ ಜಾರಿಯಾಗಿತ್ತು ಎಂದರೆ ಸಾಕ್ಷಿ ನನಗೆ ಮಾತ್ರ ಜಾರಿಯಾಗಿತ್ತು ಎಂದು ನುಡಿದಿರುತ್ತಾರೆ. ಸಮನ್ಸ್ ಜಾರಿಯಾಗಿದ್ದರು ಕೂಡ ಜಾರಿಯಾಗಿರುವುದಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಮನ್ಸ್ ಜಾರಿಯಾದ ನಂತರ ನಾವು ಚಳ್ಳಕೆರೆ ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿ ಹಾಜರಾಗಿದ್ದೇವು ಎಂದರೆ ಸರಿಯಲ್ಲ. ಸದರಿ ದಾವೆಯಲ್ಲಿ ನಾವು ಯಾವುದೇ ಮಾಹಿತಿಯನ್ನು ಪಡೆದುಕೊಂಡಿರುವುದಿಲ್ಲ. ಪ್ರತಿ ಒಂದು ದಿನಾಂಕದಂದು ಆದ ನಡವಳಿಗಳನ್ನು ನಾವು ತಿಳಿದುಕೊಂಡಿದ್ದರು ಕೂಡ ಈಗ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 1 ನೇ ಎದುರುದಾರರ ಖಾತೆ ಬದಲಾವಣೆ ಮಾಡಿಸಿಕೊಂಡು ದಾವಾ ಸ್ವತ್ತಿನ ಮನೆಯಲ್ಲಿ ವಾಸವಾದ ನಂತರ ಅವರಿಗೆ ತೊಂದರೆ ಕೊಡಲು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಈಗ ಹಾಲಿ ಚಳ್ಳಕೆರೆಯಲ್ಲಿ ವಾಸವಾಗಿದ್ದೇನೆಂದರೆ ಸರಿ. ಚಳ್ಳಕೆರೆಯಲ್ಲಿ ವಾಸವಾಗಿದ್ದರು ಕೂಡ ನಾನು ತಪ್ಪಾಗಿ ಮೇಲ್ಮನವಿಯಲ್ಲಿ ಹೊಸಪೇಟೆಯಲ್ಲಿ ವಾಸವಾಗಿದ್ದೇನೆಂದು ಬರೆಸಿರುತ್ತೇನೆ ಎಂದು ಸಮನ್ಸ್ ಬಂದಾಗ ಹೊಸಪೇಟೆಯಲ್ಲಿ ವಾಸವಾಗಿದ್ದೇನು ಎಂದು ನುಡಿದಿರುತ್ತಾರೆ. ಎಲ್ಲಾ ಮಾಹಿತಿ ಇದ್ದರು ಕೂಡ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಉದ್ದೇಶಪೂರ್ವಕವಾಗಿ ನಾವು ದಾವೆಯಲ್ಲಿ ಯಾವುದೇ ಪ್ರತಿವಾದ ಪತ್ರವನ್ನು ಸಲ್ಲಿಸಿರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು). ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಳ್ಳಕೆರೆ.